ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-234338

CHAMUNDESHWARI ELECTRICITY
SUPPLY CORPORATION LIMITED
*(A Government of Karnataka Undertaking)*
Corporate Office,
CESC, Mysuru-570017
**Web Site: www.cescmysore.org.**
E-mail ID:gmhrd@cescmysore.org

Company Identity Number[CIN]:- **U40109KA2004SGC035177**

ಕ್ರಮಾಂಕ : ಚಾವಿಸನಿನಿ/ಆ ಮತ್ತು ಮಾ.ಸಂ/02/ಎಂ.ಎಫ್-26/2022-23 / cys-321 ದಿನಾಂಕ: 04 JUN 2022

## ಸುತ್ತೋಲೆ

**ವಿಷಯ:** ಚಾವಿಸನಿನಿಯ ಎಲ್ಲಾ ಕಛೇರಿಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಿಸುವ ಬಗ್ಗೆ.
**ಉಲ್ಲೇಖ:** ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು ಪತ್ರ ಸಂಖ್ಯೆ: ಎನರ್ಜಿ 62 ಸಿಓಆರ್‌ಡಿ 2022 ದಿನಾಂಕ:18.02.2022.

******

ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 79/2021(GM-KLA) ದಿನಾಂಕ: 10.11.2021ರಂದು ನೀಡಿರುವ ನಿರ್ದೇಶನದನ್ವಯ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು/ಮಂಡಳಗಳು ಈ ಕೆಳಗಿನ ಕಾರ್ಯ ವಿಧಾನವನ್ನು ಅನುಸರಿಸಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ನಿಗದಿತ ನಮೂನೆಯಲ್ಲಿ **"ನಗದು ಘೋಷಣೆ ವಹಿ"**ಯನ್ನು ನಿರ್ವಹಣೆ ಮಾಡುವಂತೆ ನಿರ್ದೇಶಿಸಲಾಗಿದೆ.

1. ನಿಗಮದ ಪ್ರತಿಯೊಬ್ಬ ನೌಕರರ ವೈಯುಕ್ತಿಕ ನಗದನ್ನು ಗಮನಿಸಲು ಪ್ರತಿ ಕೆಲಸದ ದಿನದ ಪ್ರಾರಂಭದಲ್ಲಿ **"ನಗದು ಘೋಷಣೆ ವಹಿ"** ಯನ್ನು ತೆರೆಯತಕ್ಕದ್ದು.
2. ಸರ್ಕಾರಿ ನೌಕರರು ಅಧಿಕೃತ ಸಹಿ ಹಾಜರಾತಿ ವಹಿ/ಎಎಂಎಸ್ ನಲ್ಲಿ ಕೆಲಸದ ದಿನದಂದು ಕರ್ತವ್ಯಕ್ಕೆ ವರದಿ ಮಾಡಿದ ತಕ್ಷಣ ಅವನು/ಅವಳು ಕಛೇರಿಗೆ ತಂದು ನಗದು ಮೊತ್ತವನ್ನು **"ನಗದು ಘೋಷಣೆ ವಹಿ"**ಯಲ್ಲಿ ತನ್ನ ಸಹಿಯೊಂದಿಗೆ ಘೋಷಿಸತಕ್ಕದ್ದು.
3. **"ನಗದು ಘೋಷಣೆ ವಹಿ"**ಯು ಸಂಬಂಧಪಟ್ಟ ವಿಭಾಗ/ಶಾಖೆಯ ಗ್ರೂಪ್-ಬಿ ಅಧಿಕಾರಿಯ ವಶದಲ್ಲಿರತಕ್ಕದ್ದು ಮತ್ತು ಸದರಿ ಅಧಿಕಾರಿಯು ನೌಕರರು ಮಾಡಿದ ನಮೂದುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.
4. ಯಾವುದೇ ನೌಕರರು **"ನಗದು ಘೋಷಣೆ ವಹಿ"**ಯಲ್ಲಿ ಘೋಷಿಸಿದ್ದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡು ಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ನೌಕರರ ಹೊಣೆಯಾಗಿರುತ್ತದೆ.
5. **"ನಗದು ಘೋಷಣೆ ವಹಿ"**ಯನ್ನು ಕಛೇರಿ ವೇಳೆಯ ಎಲ್ಲಾ ಸಮಯದಲ್ಲಿ ಯಾವುದೇ ಉನ್ನತ/ಸಕ್ಷಮ ಪ್ರಾಧಿಕಾರ/ಘಟಕದ ಮುಖ್ಯಸ್ಥರು/ ವಿಭಾಗದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು.

ಮೇಲಿನ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಲೋಪವನ್ನು ಗಂಭೀರವಾಗಿ ಪರಿಗಣಿಸಲಾಗುವುದು.

ಆದೇಶದ ಮೇರೆಗೆ

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು.

| ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ ಅನುಮೋದಿಸಲ್ಪಟ್ಟಿರುತ್ತದೆ. |
|---|

**ಪ್ರತಿಗಳು:**

1. ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ). ಚಾವಿಸನಿನಿ, ಮೈಸೂರು.
2. ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
3. ಪ್ರಧಾನ ವ್ಯವಸ್ಥಾಪಕರು, ತಾಂತ್ರಿಕ/ವಾಣಿಜ್ಯ/ಖರೀದಿ/ಯೋಜನೆಗಳು/ಲೆಕ್ಕ ಮತ್ತು ಕಂದಾಯ/ಜಿ&ಆರ್/ಆ &ಮಾಸಂ/ ನಿಗಮ ಕಛೇರಿ, ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ.
4. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ,.
5. ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
6. ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್. ಶಾಖೆ,) ನಿಗಮ ಕಛೇರಿ, ನಿಗಮದ ವೆಬ್‌ಸೆಟ್ ನಲ್ಲಿ ಪ್ರಕಟಿಸಲು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ,
8. ಎಲ್ಲಾ ಲೆಕ್ಕಾಧಿಕಾರಿ(ಆಂ.ಫ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ,
9. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ಉಪವಿಭಾಗ, ಚಾವಿಸನಿನಿರವರು ತಮ್ಮ ಅಧೀನ ಕಛೇರಿಗಳಿಗೆ ಮಾಹಿತಿ ನೀಡಿ **"ನಗದು ಘೋಷಣೆ ವಹಿ"** ಯನ್ನು ನಿರ್ವಹಿಸಲು ಕ್ರಮವಹಿಸುವುದು.
10. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿರವರುಗಳ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತ, ಸುತ್ತೋಲೆಯ ಮಾಹಿತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿಯವರ ಗಮನಕ್ಕೆ ತರುವಂತೆ ಕೋರಿದೆ.
11. ವ್ಯ-1/ಪ್ರ.ಕ.